**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 200/2021**

ಫಿರ್ಯಾದಿ : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

ಆರೋಪಿ : ಶ್ರೀ ಸ್ವಾಮಿ

:: **ದೋಷಾರೋಪಣೆ** ::

**ಶ್ರೀ ಸತೀಶ. ಕೆ.ಜಿ. ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿಯಾದಃ-

ಶ್ರೀ ಸ್ವಾಮಿ ಬಿನ್ ಲೇಟ್ ನಂಜುಂಡೇಗೌಡ ,
ವಯಸ್ಸು ಸುಮಾರು 41 ವರ್ಷ,
ವಾಸಃ ಹಳ್ಳಿದಿಡ್ಡಿ ಗ್ರಾಮ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.

ನಿವಾಸಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 11.07.2019 ರಂದು 18.00 ಗಂಟೆಯ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹಳ್ಳಿದಿಡ್ಡಿ ಗ್ರಾಮದ ಆರೋಪಿಯಾದ ನಿಮ್ಮ ಮನೆಯ ಮುಂದೆ ನೀವು ಯಾವುದೇ ರಹದಾರಿ ಇಲ್ಲದೆ ಅಕ್ರಮವಾಗಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ 90 ಎಂ.ಎಲ್.ನ 112 ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿ ಟೆಟ್ರಾ ಪ್ಯಾಕ್ ಗಳು ಮತ್ತು 90 ಎಂ.ಎಲ್.ನ 32 ರಾಯಲ್ ಲಾನ್ಸರ್ ವಿಸ್ಕಿ ಟೆಟ್ರಾ ಪ್ಯಾಕ್ ಗಳನ್ನು ಇಟ್ಟುಕೊಂಡಿದ್ದು, ಇವುಗಳ ಮೌಲ್ಯ ರೂ.4,365/- ಆಗಿದ್ದು, ಇವುಗಳನ್ನು ಯಾವುದೇ ರಹದಾರಿ ಇಲ್ಲದೆ ಅಕ್ರಮವಾಗಿ ಮಾರಾಟ ಮಾಡುತ್ತಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ಮತ್ತು 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಆರೋಪಿ ಉತ್ತರಃ

ಪ್ರಶ್ನೆ:2– ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಯು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 23.12.2025

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.